# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀಮತಿ ಸುನಂದ, ಅಧ್ಯಕ್ಷರು, ಮಂಚನಾಯಕನಹಳ್ಳಿ ಗ್ರಾಮ ಪಂಚಾಯತಿ, ಬಿಡದಿ ಹೋಬಳಿ, ರಾಮನಗರ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ- ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

ಓದಲಾಗಿದೆ:

1. ಅಪರ ಪೋಲಿಸ್ ಮಹಾ ನಿರ್ದೇಶಕರವರ ಕಛೇರಿ, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಇವರ ಪತ್ರ ಸಂಖ್ಯೆ:ಎಸಿಬಿ/ರಾಮನಗರ/ದೂ.ಅ.ವಿ/34/2016, ದಿ:26-04-2017.
2. ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ:523:ಗ್ರಾಪಂಅ:2017, ದಿನಾಂಕ:29-05-2017.
3. ಶ್ರೀಮತಿ ಸುನಂದ, ಅಧ್ಯಕ್ಷರು, ಮಂಚನಾಯಕನಹಳ್ಳಿ ಗ್ರಾಮ ಪಂಚಾಯತಿ, ರಾಮನಗರ ತಾಲ್ಲೂಕು ಮತ್ತು ಜಿಲ್ಲೆ ರವರು ಕಾರಣ ಕೇಳುವ ನೋಟೀಸ್‌ಗೆ ಸಲ್ಲಿಸಿರುವ ಸಮಜಾಯಿಷಿ ದಿನಾಂಕ:22-07-2017 ಮತ್ತು 08-08-2017.
4. ವಿಚಾರಣಾ ತಿಳುವಳಿಕೆ ಪತ್ರದ ದಿನಾಂಕ:25-07-2017 ಮತ್ತು ದಿನಾಂಕ:03-08-2017.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ:26-04-2017ರ ಅಪರ ಪೋಲಿಸ್ ಮಹಾ ನಿರ್ದೇಶಕರವರ ಕಛೇರಿ, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ರವರ ಪತ್ರದಲ್ಲಿ ಶ್ರೀಮತಿ ಸುನಂದ, ಅಧ್ಯಕ್ಷರು, ಮಂಚನಾಯಕನಹಳ್ಳಿ ಗ್ರಾಮ ಪಂಚಾಯತಿ, ಬಿಡದಿ ಹೋಬಳಿ, ರಾಮನಗರ ತಾಲ್ಲೂಕು ಮತ್ತು ಜಿಲ್ಲೆ ರವರು ತಾಳಗುಪ್ಪ ಸರ್ವೆ ನಂಬರ್ 63ರಲ್ಲಿ ಒಟ್ಟು 5.32 ಗುಂಟೆ ಭೂ ಪರಿವರ್ತನೆಯಾದ ಜಮೀನಿಗೆ ಸಂಬಂಧಿಸಿದಂತೆ ದಿನಾಂಕ:06-11-2015ರ ಸಾಮಾನ್ಯ ಸಭೆಯಲ್ಲಿ ನಿಯಮ ಬಾಹಿರವಾಗಿ ಲೇಔಟ್ ನಕ್ಷೆಗೆ ಅನುಮೋದನೆ ನೀಡಲು ತೀರ್ಮಾನ ಕೈಗೊಂಡಿದ್ದು ಹಾಗೂ ನಿಯಮಕ್ಕೆ ವಿರುದ್ಧವಾಗಿ ಲೇಔಟ್ ವಿನ್ಯಾಸ ನಕ್ಷೆಗೆ ಅನುಮೋದಿಸಿ ಸರ್ಕಾರದ ಸುತ್ತೋಲೆಗಳ ಉಲ್ಲಂಘನೆ ಮಾಡಿ ಕರ್ತವ್ಯಲೋಪವೆಸಗಿರುವ ಶ್ರೀಮತಿ ಸುನಂದ. ಅಧ್ಯಕ್ಷರು, ಮಂಚನಾಯಕನಹಳ್ಳಿ ಗ್ರಾಮ ಪಂಚಾಯಿತಿ, ಬಿಡದಿ ಹೋಬಳಿ, ರಾಮನಗರ ತಾಲ್ಲೂಕು, ರಾಮನಗರ ಜಿಲ್ಲೆ, ರವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರಡಿಯಲ್ಲಿ ಶಿಸ್ತು ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಶ್ರೀಮತಿ ಸುನಂದ, ಅಧ್ಯಕ್ಷರು, ಮಂಚನಾಯಕನಹಳ್ಳಿ ಗ್ರಾಮ ಪಂಚಾಯತಿ ರವರಿಗೆ ದಿನಾಂಕ:29-05-2017 ರಂದು ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ಶ್ರೀಮತಿ ಸುನಂದ, ಅಧ್ಯಕ್ಷರು ನಮ್ಮ ಪಂಚಾಯತಿಯ ಸದಸ್ಯರಾದಂತಹ ಶ್ರೀ ರಾಘವೇಂದ್ರ ಆರ್ ರವರು ನೀಡಿರುವ ದೂರು ನಿರಾಧಾರವಾಗಿದ್ದು ಹಾಗೂ ರಾಜಕೀಯ ದುರುದ್ದೇಶದಿಂದ ನಮ್ಮ ಅಭಿವೃದ್ಧಿ ಕಾರ್ಯಗಳನ್ನು ಸಹಿಸದೇ ನೀಡಿರುವ ದೂರಾಗಿರುತ್ತದೆ. ನಾನು ಸರ್ವೆ ನಂ.63 ರಲ್ಲಿ ಒಟ್ಟು ವಿಸ್ತೀರ್ಣ 5.32 ಗುಂಟೆ ಸ್ವತ್ತಿನ ಸಂಬಂಧ ಲೇಔಟ್ ವಿನ್ಯಾಸ ನಕ್ಷೆಗೆ ಯಾವುದೇ ಸಹಿ ಮಾಡಿರುವುದಿಲ್ಲ. ಆ ರೀತಿ ಯಾವುದಾದರೂ ಸಹಿ ಮಾಡಿದ್ದಲ್ಲಿ ಸೂಕ್ತ ದಾಖಲೆಗಳೊಂದಿಗೆ ರುಜುವಾತು ಮಾಡಿ ನನ್ನ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಬಹುದೆಂದು ವಿನಂತಿಸಿಕೊಳ್ಳುತ್ತೇನೆ. ಕೆಲವರು ಪಟ್ಟಭದ್ರ ಹಿತಾಸಕ್ತಿಯುಳ್ಳವರು ನನ್ನ ಏಳಿಗೆ ಸಹಿಸಲಾಗದೆ ಸುಳ್ಳು ದೂರನ್ನು ನೀಡಿರುತ್ತಾರೆ. ನಾನು ಬೇರೆ ದಾಖಲೆಗಳಿಗೆ ಸಹಿ ಮಾಡಿರುವ ನನ್ನ ಸಹಿಯನ್ನು ನಕಲು ಮಾಡಿ ನನ್ನ ಹೆಸರಿಗೆ ಕಳಂಕ ಬರುವಂತೆ ಮಾಡಲು ಈ ರೀತಿ ಸುಳ್ಳು ಜೆರಾಕ್ಸ್ ಪ್ರತಿಗಳನ್ನು ದಾಖಲೆಗಳನ್ನು ನೀಡಿ ನನ್ನ ತೇಜೋವಧೆ ಮಾಡಲು ಪ್ರಯತ್ನಿಸಿ ಈ ರೀತಿ ಸುಳ್ಳು ದೂರು ನೀಡಿರುತ್ತಾರೆ. ಲೇಔಟ್ ನಕ್ಷೆಗೆ ಸಹಿ ಮಾಡಲು ನನಗೆ ಅಧಿಕಾರವಿರುವುದಿಲ್ಲ. ಯಾವುದೇ ದಾಖಲೆಗಳಿಲ್ಲದೆ ಸುಳ್ಳು ಆರೋಪ ಮಾಡಿರುತ್ತಾರೆ. ನಾನು ನಿರಪರಾಧಿಯಾಗಿದ್ದು, ನನ್ನ ಮೇಲೆ ನೀಡಿರುವ ಪಿರ್ಯಾದನ್ನು ಪರಿಶೀಲಿಸಿ ಕ್ರಮ ಜರುಗಿಸಬೇಕಾಗಿ ಕೇಳಿಕೊಂಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಶ್ರೀಮತಿ ಸುನಂದ, ಅಧ್ಯಕ್ಷರು, ಮಂಚನಾಯಕನಹಳ್ಳಿ ಗ್ರಾಮ ಪಂಚಾಯತಿ, ಬಿಡದಿ ಹೋಬಳಿ, ರಾಮನಗರ ತಾಲ್ಲೂಕು ಮತ್ತು ಜಿಲ್ಲೆ ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಾನ್ಯ ಪ್ರಧಾನ

ಮತ್ತು 08-08-2017 ರಂದು ಜರುಗಿದ ವಿಚಾರಣೆಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮಂಚನಾಯಕನಹಳ್ಳಿ ಗ್ರಾಮ ಪಂಚಾಯತಿ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ರಾಮನಗರ, ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ ರಾಮನಗರ ಹಾಗೂ ಆಪಾದಿತ ಅಧ್ಯಕ್ಷರು ಮತ್ತು ಸದರಿಯವರ ಪರವಾಗಿ ಅವರ ವಕೀಲರು ಹಾಜರಿರುತ್ತಾರೆ ಹಾಗೂ ತಮ್ಮ ಹೇಳಿಕೆಯನ್ನು ಸಲ್ಲಿಸಿರುತ್ತಾರೆ.

ಸರ್ಕಾರವು ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಹಾಗೂ ಆಪಾದಿತ ಅಧ್ಯಕ್ಷರ ಹೇಳಿಕೆಯನ್ನು ಪರಿಶೀಲಿಸಲಾಗಿದ್ದು, ಈ ವಿಷಯದಲ್ಲಿ ಸದರಿ ಅಧ್ಯಕ್ಷರ ಗಮನಕ್ಕೆ ತಾರದೇ ಕ್ರಮ ಕೈಗೊಂಡಿರುವುದು ಕಂಡುಬಂದಿರುವ ಹಿನ್ನೆಲೆಯಲ್ಲಿ ಶ್ರೀಮತಿ ಸುನಂದ, ಅಧ್ಯಕ್ಷರು, ಮಂಚನಾಯಕನಹಳ್ಳಿ ಗ್ರಾಮ ಪಂಚಾಯತಿ, ಬಿಡದಿ ಹೋಬಳಿ, ರಾಮನಗರ ತಾಲ್ಲೂಕು ಮತ್ತು ಜಿಲ್ಲೆ ರವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ರಂತೆ ಪ್ರಾರಂಭಿಸಿರುವ ವಿಚಾರಣೆಯನ್ನು ಕೈಬಿಟ್ಟು, ಪ್ರಕರಣವನ್ನು ಮುಕ್ತಾಯಗೊಳಿಸಲು ಸರ್ಕಾರವು ನಿರ್ಧರಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/523/ಗ್ರಾಪಂಅ/2017, ಬೆಂಗಳೂರು, ದಿನಾಂಕ:09-04-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಸುನಂದ, ಅಧ್ಯಕ್ಷರು, ಮಂಚನಾಯಕನಹಳ್ಳಿ ಗ್ರಾಮ ಪಂಚಾಯತಿ, ರಾಮನಗರ ತಾಲ್ಲೂಕು ಮತ್ತು ಜಿಲ್ಲೆ ಇವರ ಈ ಪ್ರಕರಣದಲ್ಲಿ ಸದರಿ ಅಧ್ಯಕ್ಷರ ಗಮನಕ್ಕೆ ತಾರದೇ ಕ್ರಮ ಕೈಗೊಂಡಿರುವುದು ಕಂಡುಬಂದಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ರಂತೆ ಪ್ರಾರಂಭಿಸಿರುವ ವಿಚಾರಣೆಯನ್ನು ಕೈಬಿಟ್ಟು, ಪ್ರಕರಣವನ್ನು ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

11/4/18

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಗಳು:**

1) ಅಪರ ಪೋಲಿಸ್ ಮಹಾ ನಿರ್ದೇಶಕರವರ ಕಛೇರಿ, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ರಾಮನಗರ, ರಾಮನಗರ ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ರಾಮನಗರ, ರಾಮನಗರ ಜಿಲ್ಲೆ.
4) ಶ್ರೀಮತಿ ಸುನಂದ, ಅಧ್ಯಕ್ಷರು, ಮಂಚನಾಯಕನಹಳ್ಳಿ ಗ್ರಾಮ ಪಂಚಾಯತಿ, ರಾಮನಗರ ತಾಲ್ಲೂಕು ಮತ್ತು ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮಂಚನಾಯಕನಹಳ್ಳಿ ಗ್ರಾಮ ಪಂಚಾಯತಿ, ರಾಮನಗರ ತಾಲ್ಲೂಕು ಮತ್ತು ಜಿಲ್ಲೆ.
6) ಗಣಕ ಕೋಶ.
7) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.